# ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋ

**4ನೇ ಮಹಡಿ, ಕೃಷಿ ಭವನ, ನೃಪತುಂಗ ರಸ್ತೆ, ರಾಣಿ ಚೆನ್ನಮ್ಮ ವೃತ್ತ, ಬೆಂಗಳೂರು– 56**

**ದೂರವಾಣಿ ಸಂಖ್ಯೆ: 080–22115291/92 E-mail:kscpcr@gmail.com**


## ಕೋವಿಡ್–19 ಸಾಂಕ್ರಾಮಿಕ ಸಮಯದಲ್ಲಿ ಆಯೋಗವು ಕೈಗೊಂಡ ಚಟುವಟಿಕೆಗಳ ವಿಶೇಷ ವರದಿ

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಮಕ್ಕಳ ಹಕ್ಕುಗಳ ರಕ್ಷಣೆಗಾಗಿ ದೂರುಗಳನ್ನು ಸ್ವೀಕರಿಸುತ್ತಿದೆ ಮತ್ತು ಆಯೋಗದ ಸದಸ್ಯರ ಪ್ರಾದೇಶಿಕ ಕಛೇರಿಗಳ ಮೂಲಕ ರಾಜ್ಯಾದ್ಯಂತ ಮಕ್ಕಳು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಪರಿಶೀಲನೆ ನಡೆಸುವ ಕೆಲಸವನ್ನು ಮಾಡುತ್ತಿದೆ. ಕೋವಿಡ್–19 ಅವಧಿಯು ಬಹಳ ಸವಾಲಿನಿಂದ ಕೂಡಿದ್ದಾಗಿದೆ ಮತ್ತು ಇಂತಹ ಕಷ್ಟದ ಸಮಯದಲ್ಲಿ ಮಕ್ಕಳ ಶೋಷಣೆಯನ್ನು ತಡೆಯಲು ಆಯೋಗವು ಮುಂಜಾಗೃತ ಕ್ರಮಗಳನ್ನು ಕೈಗೊಂಡಿದೆ. ಮಕ್ಕಳ ಹಕ್ಕುಗಳ ರಕ್ಷಣೆಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಂಡಿರುತ್ತದೆ.

**(a) ಕೋವಿಡ್ ಸಹಾಯವಾಣಿ:** ರಾಜ್ಯದ ಮಕ್ಕಳ ಹಕ್ಕುಗಳನ್ನು ರಕ್ಷಿಸುವ ನಿಟ್ಟಿನಲ್ಲಿ ಕೋವಿಡ್–19 ಅವಧಿಯಲ್ಲಿ ಆಯೋಗವು ಸಹಾಯವಾಣಿಯನ್ನು ಆರಂಭಿಸಿರುತ್ತದೆ. ದಿನಾಂಕ: 18–05–2020ರಿಂದ ಕಾರ್ಯನಿರ್ವಹಿಸುತ್ತಿದೆ. ಮಕ್ಕಳ ಹಕ್ಕುಗಳ ಉಲ್ಲಂಘನೆಗೆ ಸಂಬಂಧಿಸಿದಂತೆ ಯಾವುದೇ ದೂರುಗಳನ್ನು ದಾಖಲಿಸಬಹುದಾಗಿದೆ. ಮಕ್ಕಳಿಗೆ ಸಹಾಯವಾಗುವ ನಿಟ್ಟಿನಲ್ಲಿ ನಿಗದಿತ ಸಮಯದ ಒಳಗೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು. ಈ ಸಹಾಯವಾಣಿಯು ಆಯೋಗದ ಸದಸ್ಯರುಗಳು, 30 ಜಿಲ್ಲೆಗಳ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಅಧಿಕಾರಿಗಳು, ಸಿಬ್ಬಂದಿಗಳನ್ನು ಸೇರಿ 50 ಸಂಪನ್ಮೂಲ ವ್ಯಕ್ತಿಗಳು ಒಳಗೊಂಡು, ಮಕ್ಕಳ ಕಳ್ಳ ಸಾಗಣೆ, ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿ, ಶಾಲೆಗೆ ಸಂಬಂಧಿಸಿದ ಸಮಸ್ಯೆಗಳು, ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ, ಕಾಣೆಯಾದ ಮಕ್ಕಳು ಹಾಗೂ ಮಕ್ಕಳು ಎದುರಿಸುತ್ತಿರುವ ಯಾವುದೇ ರೀತಿಯ ಮಕ್ಕಳ ಉಲ್ಲಂಘನೆಗೆ ಸಂಬಂಧಿಸಿದಂತೆ ವರದಿ ಮಾಡಲು ಆಯೋಗದ ಸಹಾಯವಾಣಿಯನ್ನು ಸಂಪರ್ಕಿಸುವ ಬಗ್ಗೆ ಜಾಗೃತಿ ಮೂಡಿಸುತ್ತಿದ್ದಾರೆ.

**(b) ಮಕ್ಕಳ ಹಕ್ಕುಗಳ ಕುರಿತು ಜಾಗೃತಿ:** ಆಯೋಗದ 06 ಜನ ಸದಸ್ಯರುಗಳು 4–5 ಜಿಲ್ಲೆಗಳನ್ನು ಒಳಗೊಂಡಂತೆ ಕಾರ್ಯನಿರ್ವಹಿಸುತ್ತಿದ್ದಾರೆ. ಬಾಲ್ಯವಿವಾಹ, ಬಾಲಕಾರ್ಮಿಕ ಪದ್ಧತಿಯಂತಹ ಸಾಮಾಜಿಕ ಸಮಸ್ಯೆಗಳನ್ನು ನಿವಾರಿಸಲು ತಮ್ಮ ತಮ್ಮ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಶಾಲೆಗೆ ಸಂಬಂಧಿಸಿದ ಸಮಸ್ಯೆಗಳು, ಕಳ್ಳ ಸಾಗಣೆ, ದೈಹಿಕ ಮತ್ತು ಮಾನಸಿಕ ಕಿರುಕುಳ ಮುಂತಾದ ಯಾವುದೇ ವಿಷಯಗಳ ಬಗ್ಗೆ ಆಯೋಗವನ್ನು ಸಂಪರ್ಕಿಸಲು ಜಾಗೃತಿಯನ್ನು ಮೂಡಿಸುತ್ತಿದ್ದಾರೆ.

**(c) ಕ್ಷೇತ್ರ ಭೇಟಿ:** ಕೋವಿಡ್–19 ಅವಧಿಯಲ್ಲಿ ಹೆಚ್ಚುತ್ತಿರುವ ಬಾಲ್ಯವಿವಾಹ, ಬಾಲಕಾರ್ಮಿಕ ಹಾಗೂ ಮಕ್ಕಳ ಹಕ್ಕುಗಳ ಉಲ್ಲಂಘನೆಯ ಪ್ರಕರಣಗಳ ಕುರಿತು ಪರಿಶೀಲನೆ ಮತ್ತು ವಿಚಾರಣೆ ನಡೆಸಲು ಆಯೋಗದ ಮಾನ್ಯ ಅಧ್ಯಕ್ಷರು ಹಾಗೂ ಸದಸ್ಯರುಗಳು ಕ್ಷೇತ್ರ ಭೇಟಿಯನ್ನು ಕೈಗೊಂಡಿರುತ್ತಾರೆ. ಘಟನೆಗಳ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳೊಂದಿಗೆ ಚರ್ಚೆ ನಡೆಸಿರುತ್ತಾರೆ.

**(d) ಆಯೋಗವು ಶಿಕ್ಷಣ ಇಲಾಖೆಗೆ ಈ ಕೆಳಕಂಡಂತೆ ನಿರ್ದೇಶನಗಳನ್ನು ಕಳುಹಿಸಲಾಗಿರುತ್ತದೆ.**

- **ಮಕ್ಕಳ ಶಾಲಾ ದಾಖಲಾತಿ:** ಮಕ್ಕಳು ಬಾಲಕಾರ್ಮಿಕರಾಗದಂತೆ ತಡೆಯುವ ನಿಟ್ಟಿನಲ್ಲಿ ಆಯೋಗವು ವಲಸೆ ಕಾರ್ಮಿಕರ ಮಕ್ಕಳು ಮತ್ತು ಹಳ್ಳಿಗಳಲ್ಲಿನ ಮಕ್ಕಳು ಶಾಲೆಗೆ ದಾಖಲಾಗುವಂತೆ ನೋಡಿಕೊಳ್ಳಲು/ ಖಚಿತಪಡಿಸಿಕೊಳ್ಳಲು ಆಯೋಗವು ಕ್ರಮ ಕೈಗೊಳ್ಳಲು ಮುಂದಾಗಿರುತ್ತದೆ. ಎ.ಪಿ.ಎಂ.ಸಿ ಯಾರ್ಡ್‌ಗಳಲ್ಲಿ ಮಕ್ಕಳು ಬಾಲಕಾರ್ಮಿಕ ಪದ್ಧತಿಯಿಂದ ಜಿಲ್ಲಾಧಿಕಾರಿಗಳ ಸಮನ್ವಯದಿಂದ ತಡೆ ಹಿಡಿಯಲಾಗಿದೆ. ಶಾಲಾ ತರಗತಿ ಆರಂಭ ಆಗುವ ಮುಂಚೆ ಶಾಲೆ ಬಿಟ್ಟ ಮಕ್ಕಳ ಕುರಿತು ಸಮೀಕ್ಷೆ ನಡೆಸುವಂತೆ ನಿರ್ದೇಶನ ನೀಡಲಾಗಿದೆ. ಶಾಲೆ ಆರಂಭಿಸುವ ಕುರಿತು ಸರ್ಕಾರ ಘೋಷಣೆ ನೀಡಿದಾಗ ಈ ಮಕ್ಕಳನ್ನು ಶಾಲೆಗೆ ದಾಖಲಿಸಲು ಅನುಕೂಲವಾಗುತ್ತದೆ.
- **ರೇಡಿಯೋ ಹಾಗೂ ಟಿ.ವಿ ಮಾಧ್ಯಮ ತರಗತಿ:** ಪ್ರಸ್ತುತ ಸನ್ನಿವೇಶದಲ್ಲಿ ಶಾಲೆಗಳು ಮುಚ್ಚಲ್ಪಟ್ಟಿರುವುದರಿಂದ ಗ್ರಾಮೀಣ ಪ್ರದೇಶದಲ್ಲಿ ಆನ್‌ಲೈನ್ ತರಗತಿಗಾಗಿ ನೆಟ್‌ವರ್ಕ್ ಸೇವೆಯು ಪ್ರಮುಖ ಸಮಸ್ಯೆ ಸಮಸ್ಯೆಯಾಗಿದೆ. ಬಹುತೇಕ ಮನೆಗಳಲ್ಲಿ ರೇಡಿಯೋ ಮತ್ತು ಟಿ.ವಿಗಳು ಇರುವುದರಿಂದ ರೇಡಿಯೋ ಮತ್ತು ಟಿ. ವಿ ಮಾಧ್ಯಮದ ಮೂಲಕ (ಸರ್ಕಾರಿ ಮತ್ತು ಕೇಬಲ್ ಚಾನೆಲ್‌ಗಳು) ತರಗತಿಗಳನ್ನು ನಡೆಸುವಂತೆ ಶಿಕ್ಷಣ ಇಲಾಖೆಗೆ ನಿರ್ದೇಶನವನ್ನು ಕಳುಹಿಸಲಾಗಿದೆ.

**(e) ಚುಚ್ಚು ಮದ್ದು ಕಾರ್ಯಕ್ರಮವನ್ನು ಮುಂದುವರೆಸುವ ಬಗ್ಗೆ:** ಕೋವಿಡ್–19 ಅವಧಿಯಲ್ಲಿ ಕೋರೋನಾ ವಿರುದ್ಧ ಹೋರಾಡುವಲ್ಲಿ ಗಮನ ಹರಿಸುತ್ತಿರುವುದರಿಂದ ಈ ಹಿಂದೆ ಚುಚ್ಚುಮದ್ದು ಕಾರ್ಯಕ್ರಮಕ್ಕೆ ಯಾವ ರೀತಿಯಲ್ಲಿ ಪ್ರಾಧಾನ್ಯತೆ ನೀಡಲಾಗಿತ್ತೋ, ಈಗಲೂ ಅದೇ ಮಾದರಿಯ ಪ್ರಾಧಾನ್ಯತೆಯನ್ನು ನೀಡಿ, ರೋಗ ನಿರೋಧಕ ಕಾರ್ಯಕ್ರಮವು ಲಭ್ಯವಿರುವ ಬಗ್ಗೆ ಖಚಿತಪಡಿಸಿಕೊಳ್ಳುವಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ನಿರ್ದೇಶನಗಳನ್ನು ಕಳುಹಿಸಲಾಗಿದೆ.

**(f) ಗ್ರಾಮ ಮಟ್ಟದ ಕಾರ್ಯಪಡೆ:** ಕೋವಿಡ್–19ನ್ನು ನಿಯಂತ್ರಿಸುವ ಬಗ್ಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮ ಮಟ್ಟದ ಕಾರ್ಯಪಡೆಯನ್ನು ರಚಿಸಿದ್ದು, ಬಾಲ್ಯವಿವಾಹ, ಬಾಲಕಾರ್ಮಿಕದಂತಹ ಮಕ್ಕಳ ಸಮಸ್ಯೆಗಳನ್ನು ಪಂಚಾಯತ್ ಹಂತದಲ್ಲಿಯೇ ಪರಿಹರಿಸಲು ಪ್ರತಿ ವಾರ ನಡೆಯುವ ಸಭೆಯಲ್ಲಿ ವಿಷಯ ಸೂಚಿಯನ್ನು ಸೇರಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ನಿರ್ದೇಶನಗಳನ್ನು ಕಳುಹಿಸಲಾಗಿದೆ.

**(g) ಬಾಲ್ಯವಿವಾಹಗಳನ್ನು ತಡೆಗಟ್ಟುವ ಕುರಿತು:** ವಲಸಿಗರು ತಮ್ಮ ಸ್ವಂತ ಸ್ಥಳಗಳಿಗೆ ಹಿಂತಿರುಗಿರುವುದರಿಂದ ಮತ್ತು ಪ್ರಸ್ತುತ ಆರ್ಥಿಕ ಬಿಕ್ಕಟ್ಟಿನಿಂದಾಗಿ ಅವರನ್ನು ನೋಡಿಕೊಳ್ಳುವ ಹೊಣೆಯಿಂದ ತಪ್ಪಿಸಿಕೊಳ್ಳಲು ಕಡಿಮೆ ವಯಸ್ಸಿನ ಹೆಣ್ಣು ಮಕ್ಕಳ ಮದುವೆಯನ್ನು ಮಾಡಿಸುತ್ತಾರೆ. ಈ ಸಮಸ್ಯೆಗಳನ್ನು ತಡೆಗಟ್ಟಲು ಆಯೋಗದ ಸದಸ್ಯರುಗಳು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಹಕಾರದೊಂದಿಗೆ ಮೇಲ್ವಿಚಾರಣೆಯನ್ನು ನಡೆಸಿರುತ್ತಾರೆ.

**(h) ಆನ್‌ಲೈನ್ ಸಭೆ:** ಆಯಾ ವಲಯಗಳಲ್ಲಿ ದಾಖಲಾದ ದೂರುಗಳ ಬಗ್ಗೆ ಹಾಗೂ ತ್ವರಿತವಾಗಿ ತೆಗೆದುಕೊಂಡಿರುವ ಕ್ರಮಗಳ ಕುರಿತು ಚರ್ಚಿಸಲು ಆಯೋಗದ ಮಾನ್ಯ ಅಧ್ಯಕ್ಷರು ಹಾಗೂ ಸದಸ್ಯರುಗಳು ಪ್ರತಿ ವಾರ ಸಭೆಯನ್ನು ಆಯೋಜಿಸಿರುತ್ತಾರೆ.

**ಬಾಲ ನ್ಯಾಯ ಮಂಡಳಿಯೊಂದಿಗೆ ವೆಬಿನಾರ್:** 15–07–2020ರಂದು ಆಯೋಗವು ಕರ್ನಾಟಕ ಉಚ್ಚ ನ್ಯಾಯಾಲಯ ಹಾಗೂ ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿಯ ಸಹಯೋಗದಲ್ಲಿ ಕೋವಿಡ್–19 ಸಾಂಕ್ರಾಮಿಕ ಅವಧಿಯಲ್ಲಿ ಬಾಲ ನ್ಯಾಯ ಮಂಡಳಿಯ ಕಾರ್ಯಕಲಾಪದ ಕುರಿತು ವೆಬಿನಾರ್‌ನ್ನು ನಡೆಸಿತು. ಗೌರವಾನ್ವಿತ ನ್ಯಾಯಮೂರ್ತಿ ಶ್ರೀಮತಿ ಬಿ.ವಿ ನಾಗರತ್ನ, ನ್ಯಾಯಾಧೀಶರು ಹಾಗೂ ಅಧ್ಯಕ್ಷರು, ಬಾಲ ನ್ಯಾಯ ಸಮಿತಿ, ಉಚ್ಚ ನ್ಯಾಯಾಲಯ, ಬೆಂಗಳೂರು ಇವರು ಸಭೆಯ ಪರಿಚಯಾತ್ಮಕವನ್ನು ನೀಡಿದರು. ಅಧ್ಯಕ್ಷರು ಮತ್ತು ಸದಸ್ಯರು, ಬಾಲ ನ್ಯಾಯ ಮಂಡಳಿ, ನಿರ್ದೇಶಕರು, ಐ.ಸಿ.ಪಿ.ಎಸ್ ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಹಾಗೂ ಐ.ಸಿ.ಪಿ.ಎಸ್ ನಿರ್ದೇಶನಾಲಯದ ಅಧಿಕಾರಿಗಳು ಈ ವೆಬಿನಾರ್‌ನಲ್ಲಿ ಭಾಗವಹಿಸಿದ್ದರು. ಮಕ್ಕಳ ಹಿತದೃಷ್ಟಿಯಿಂದ ಪ್ರಕರಣಗಳನ್ನು ತ್ವರಿತವಾಗಿ ವಿಲೇ ಮಾಡುವಂತೆ ಇದೇ ಸಂದರ್ಭದಲ್ಲಿ ಒತ್ತಾಯಿಸಲಾಯಿತು. ಸದರಿ ಸಭೆಯ ಪರಿಣಾಮವಾಗಿ ಆಯೋಗವು ಈ ಕೆಳಕಂಡ ಮಾರ್ಗಸೂಚಿಗಳನ್ನು ಸಿದ್ಧಪಡಿಸಿದ್ದು, ಸದ್ಯದಲ್ಲಿಯೇ ಈ ಮಾರ್ಗಸೂಚಿಗಳನ್ನು ಪಾಲಿಸುವ ಬಗ್ಗೆ ಪೊಲೀಸ್ ಇಲಾಖೆ ಕಳುಹಿಸಲಾಗುವುದು.

1. Guidelines for Police under Juvenile Justice Act in the context of Covid-19 pandemic
2. Procedures to be followed in handling cases related to Children
3. Roles and Responsibilities of Child Welfare Police Officers

**ಮಕ್ಕಳ ವಿಶೇಷ ಪೊಲೀಸ್ ಘಟಕದೊಂದಿಗೆ ವೆಬಿನಾರ್:** ಆಯೋಗವು ಆಗಸ್ಟ್–2020ರ ಮಾಹೆಯಲ್ಲಿ ಹಿರಿಯ ಮಕ್ಕಳ ಕಲ್ಯಾಣಾಧಿಕಾರಿ ಹಾಗೂ ಎಸ್.ಜೆ.ಪಿ.ಯು ಘಟಕದೊಂದಿಗೆ ರಾಜ್ಯ ಮಟ್ಟದ ಸಮಾಲೋಚನಾ ಸಭೆಯನ್ನು ಆಯೋಜಿಸಲು ಉದ್ದೇಶಿಸಿರುತ್ತದೆ. ಈ ಸಮಾಲೋಚನಾ ಸಭೆಯಲ್ಲಿ ಎಸ್.ಜೆ.ಪಿ.ಯು.ಗಳ ಕಾರ್ಯವೈಖರಿ, ಆರೈಕೆ ಮತ್ತು ಪೋಷಣೆಯ ಅವಶ್ಯವಿರುವ ಹಾಗೂ ಕಾನೂನಿನ ಸಂಘರ್ಷಕ್ಕೆ ಒಳಪಟ್ಟ ಮಕ್ಕಳ ಕುರಿತು ಅನುಸರಿಸುತ್ತಿರುವ ವಿಧಾನಗಳ ಬಗ್ಗೆ ಚರ್ಚೆ ನಡೆಸಲಾಗುತ್ತದೆ. ಆಯೋಗವು ಕಾಣೆಯಾದ ಮಕ್ಕಳ ಕುರಿತು (ಜಿಲ್ಲಾ ಮಟ್ಟದಿಂದ ರಾಜ್ಯ ಮಟ್ಟದ ವರೆಗೆ) ಕಳೆದ ಮೂರು ವರ್ಷಗಳ ಮಾಹಿತಿಯನ್ನು ಸಂಗ್ರಹಿಸಲಾಗಿದ್ದು, ಇದರ ಸಂಕ್ಷಿಪ್ತ ವರದಿಯನ್ನು (Findings) ಸಿದ್ಧಪಡಿಸಿದ್ದು, ಇದೇ ಸಂದರ್ಭದಲ್ಲಿ ಸದರಿ ವರದಿಯನ್ನು ಪ್ರಸ್ತುತ ಪಡಿಸಲಾಗುವುದು.

*******************************